ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE

# ತಹಶೀಲ್ದಾರ್ ಮೇಲೆ ಹಲ್ಲೆಗೆ ಮುಂದಾದ ಶಾಸಕ

ಶ್ರೀರಂಗಪಟ್ಟಣ: ಪಟ್ಟಣದ ತಾಪಂ ಆವರಣ ದಲ್ಲಿ ನಡೆದ ಕಂದಾಯ ಅದಾಲತ್‌ನಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಸಿ.ನಾರಾಯಣಗೌಡ, ಅಧಿಕಾರಿಗಳು ಹಾಗೂ ಶಾಸಕ ರವೀಂದ್ರ ಶ್ರೀಕಂ ಠಯ್ಯ ನಡುವೆ ಮಾತಿನ ಚಕಮಕಿ ನಡೆಯಿತು.

ತಾಲೂಕು ಆಡಳಿತ, ತಾಪಂ, ರಾಜೀವ್ ಗಾಂಧಿ ವಸತಿ ನಿಗಮದ ವತಿಯಿಂದ ನಡೆಯು ತ್ತಿದ್ದ ಕಂದಾಯ ಅದಾಲತ್ ಹಾಗೂ ಮುಖ್ಯಮಂತ್ರಿಗಳ ಗ್ರಾಮೀಣ ನಿವೇಶನ ಯೋಜನೆಯ ಹಕ್ಕುಪತ್ರ ವಿತರಣಾ ಸಮಾರಂಭದಲ್ಲಿ ಮಾತಿನ ಚಕಮಕಿ ನಡೆದಿದೆ.

**ಶಾಸಕ-ತಹಶೀಲ್ದಾರ್ ನಡುವೆ ಮಾತಿನ ಚಕಮಕಿ:** ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ಉಸ್ತುವಾರಿ ಸಚಿವ ಕೆ.ಸಿ.ನಾರಾಯಣಗೌಡ ಮೊದಲು ಮಾತನಾಡಿದ್ದಾರೆ. ಅಧ್ಯಕ್ಷತೆ ವಹಿಸಿದ್ದ ಶಾಸಕ ರವೀಂದ್ರ ಶ್ರೀಕಂಠಯ್ಯ ಮಾತನಾಡುವ ವೇಳೆ ಕಂದಾಯ ಅದಾಲತ್ ಕಾರ್ಯಕ್ರಮ ಎಂದರೆ ಏನು?, ಇಲ್ಲಿ ರೈತರು ಹಾಗೂ ಸಾರ್ವಜನಿಕರ ಸಮಸ್ಯೆ ಕೇಳಲು ಆಗುತ್ತಿಲ್ಲವೇ?, ತಾಲೂಕು ಕಚೇರಿಯಲ್ಲಿ ಲಂಚವಿಲ್ಲದೆ ಯಾವ ಕೆಲಸವೂ ನಡೆಯುತ್ತಿಲ್ಲ. ತಹಶೀಲ್ದಾರ್ ಅವರು ಯಾವುದೇ ಕೆಲಸ ಮಾಡುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಸಭೆಯಲ್ಲಿ ಮಧ್ಯಪ್ರವೇಶಿಸಿದ ಸಚಿವ ನಾರಾಯಣ ಗೌಡ.

ಇದಕ್ಕೆ ಪ್ರತಿಕ್ರಿಯಿಸಿದ ತಹಶೀಲ್ದಾರ್ ಎಂ.ವಿ. ರೂಪಾ, ನಾನು ತಹಶೀಲ್ದಾರ್ ಆಗಿ ಬಂದಾಗಿನಿಂದ ತಾಲೂಕಿನಾದ್ಯಂತ ಕಂದಾಯ ಅದಾಲತ್ ಮೂಲಕ 20 ಸಾವಿರಕ್ಕೂ ಹೆಚ್ಚು ಕಂದಾಯ ಸಮಸ್ಯೆಗಳನ್ನು ನಿವಾರಿಸಿದ್ದೇನೆ. ಅದನ್ನು ದಾಖಲೆ ಸಮೇತ ನೀಡುತ್ತೇನೆ. ಸುಮ್ಮನೆ ನಮ್ಮ ಮೇಲೆ ಆರೋಪ ಮಾಡಬೇಡಿ ಎಂದು ಪ್ರತ್ಯುತ್ತರಿಸಿದರು. ಇದರಿಂದ ಆಕ್ರೋಶಗೊಂಡ ಶಾಸಕ ರವೀಂದ್ರಶ್ರೀಕಂಠಯ್ಯ, ಏನಮ್ಮ ಮಾತನಾಡುತ್ತೀದ್ದೀಯಾ, ನಿಮ್ಮ ಕೆಲಸದ ಬಗ್ಗೆ ವಿಧಾನಸಭೆಯಲ್ಲಿ ಮಾತನಾಡಿದ್ದೇನೆ. ಉಪ ವಿಭಾಗಾಧಿಕಾರಿ ಸೇರಿದಂತೆ ಯಾವ ಅಧಿಕಾರಿಗಳು ಸಾರ್ವಜನಿಕರ ಕೆಲಸ ಮಾಡುತ್ತಿಲ್ಲ ಎಂದು ಹರಿಹಾಯ್ದು ಕೈಯಲ್ಲಿದ್ದ ಮೈಕ್‌ನಿಂದ ಹಲ್ಲೆಗೆ ಮುಂದಾದಾಗ, ಸಚಿವ ಕೆ.ಸಿ.ನಾರಾಯಣಗೌಡ ಮಧ್ಯೆ ಪ್ರವೇಶಿಸಿ ಮಹಿಳಾ ಅಧಿಕಾರಿ ಮೇಲೆ ಹೊಡೆಯಲು ಹೋಗುತ್ತಿದ್ದೀರಾ?, ಹೊಡೆಯಿರಿ ನೋಡೋಣ ಎಂದು ಕಿಡಿಕಾರಿದಾಗ ಮಾತಿಗೆ ಮಾತು ಬೆಳೆದು ವಿಕೋಪಕ್ಕೆ ತಿರುಗಿತು. ತಹಶೀಲ್ದಾರ್ ರೂಪಾ ಮಾತನಾಡಿ, ಶಾಸಕರು ನನ್ನ ಅವಮಾನಿಸುತ್ತಿದ್ದಾರೆ. ನಾನು ಇದುವರೆಗೂ ಸಾಕಷ್ಟು ಸಭೆಗಳನ್ನು ನಡೆಸಿದ್ದೇನೆ. 20 ಸಾವಿರ ಅರ್ಜಿಗಳನ್ನು ವಿಲೇ ವಾರಿ ಮಾಡಿದ್ದೇನೆ ಎಂದರು. ಇದಕ್ಕೆ ಉಪ ವಿಭಾಗಾಧಿಕಾರಿ ಶಿವಾನಂದ ಮೂರ್ತಿ ಸೇರಿ ಇತರ ಅಧಿಕಾರಿಗಳು ಸಾಥ್ ನೀಡಿದರು.